ಹಸಿರು ಕಾರ್ಡ್ ವಿತರಣೆಯಲ್ಲಿ ತಾರತಮ್ಯ.

986(939) ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) :— ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕರ್ನಾಟಕ ರಾಜ್ಯದಲ್ಲಿ ಹಸಿರು ಕಾರ್ಡ್ ವಿತರಣೆ ಮಾಡುವಾಗ ತಾರತಮ್ಯ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹಸಿರು ಕಾರ್ಡ್ ಪಡೆಯುವವರಿಗೆ ಇರಬೇಕಾದ ವಾರ್ಷಿಕ ವರಮಾನವೆಷ್ಟು.

ಇ) ಪಡಿತರ ಚೀಟಿ ವಿತರಣೆಯಲ್ಲಿ, ತಾರತಮ್ಯ ಮಾಡುತ್ತಿರುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು.

ಶ್ರೀ ಜಿ. ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :—

ಅ) ಇಲ್ಲ

ಆ) ಗ್ರಾಮಾಂತರ ಪ್ರದೇಶದಲ್ಲಿ ವಾರ್ಷಿಕ ರೂ. 3,400-00 ಹಾಗೂ ನಗರ ಪ್ರದೇಶದಲ್ಲಿ, ಕೊಳಚೆ ಪ್ರದೇಶಗಳಲ್ಲಿ ವಾಸಿಸುವವರಿಗೆ ವಾರ್ಷಿಕ ರೂ. 11,850-00

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಗೃಹಮಂಡಳಿ ವತಿಯಿಂದ ಹೊಸ ಬಡಾವಣೆ.

987(943) ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) :— ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಚಿಕ್ಕಮಗಳೂರು ನಗರದಲ್ಲಿ ಕರ್ನಾಟಕ ಗೃಹ ಮಂಡಳಿವತಿಯಿಂದ ಹೊಸ ಬಡಾವಣೆ ರಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಬಡಾವಣೆಯಲ್ಲಿ ಪೋಲೀಸ್ ಠಾಣೆ ಪ್ರಾರಂಭಮಾಡಲು ಸಾರ್ವಜನಿಕರಿಂದ ಸರ್ಕಾರಕ್ಕೆ ಬೇಡಿಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಪೋಲೀಸ್ ಠಾಣೆ ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?